ಶ್ರೀಮತಿ ಮನೋರಮಾ ಮಧ್ವರಾಜ್ (ಆರೋಗ್ಯ ಹಾಗೂ ಕುಟುಂಬ ಕಲ್ಯಾಣ ಮಂತ್ರಿಗಳು).—

ಅ) ೧೧೨.

ಆ) ಇಲ್ಲ.

ಇ) ಉದ್ಭವಿಸುವುದಿಲ್ಲ.

ನೂತನ ವೈದ್ಯಕೀಯ ಕಾಲೇಜು ಪ್ರಾರಂಭಿಸಲು ಅರ್ಜಿಗಳ ವಿವರ

೮೫೨(ಕ್ಯೂ೧) ಶ್ರೀ ಎಲ್. ಶಿವರಾಮೇಗೌಡ (ನಾಗಮಂಗಲ).—ಮಾನ್ಯ ಆರೋಗ್ಯ ಹಾಗೂ ಕುಟುಂಬ ಕಲ್ಯಾಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೇ :—

ಅ) ರಾಜ್ಯದಲ್ಲಿ ನೂತನವಾಗಿ ವೈದ್ಯಕೀಯ ಕಾಲೇಜುಗಳನ್ನು ಪ್ರಾರಂಭಿಸಲು ಅರ್ಜಿ ಸಲ್ಲಿಸಿರುವ ಖಾಸಗಿ ವ್ಯಕ್ತಿ–ಸಂಸ್ಥೆಗಳ ಹೆಸರುಗಳೇನು?

ಆ) ವೈಲ್ಯಂಡ ಅರ್ಜಿದಾರರ ಮನವಿಗಳ ಕುರಿತು ಸರ್ಕಾರ ಕೈಕೊಳ್ಳಲಿರುವ ನಿರ್ದಿಷ್ಟ ನಿಲುವುಗಳೇನು?

ಇ) ರಾಜ್ಯದಲ್ಲಿ ಇಂಡಿಯನ್ ಮೆಡಿಕಲ್ ಕೌನ್ಸಿಲ್‌ನಿಂದ ಮಾನ್ಯತೆ ಪಡೆಯದ ವೈದ್ಯಕೀಯ ಕಾಲೇಜುಗಳ ಸಂಖ್ಯೆ ಎಷ್ಟು ಮತ್ತು ಅವು ಯಾವುವು?

ಶ್ರೀಮತಿ ಮನೋರಮಾ ಮಧ್ವರಾಜ್ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮಂತ್ರಿಗಳು).—

ಅ) ವಿಶ್ವವಿದ್ಯಾನಿಲಯದ ಮುಖಾಂತರ ಬಂದ ಪ್ರಸ್ತಾವನೆಗಳು :

೧) ಸಹ್ಯಾದ್ರಿ ವಿದ್ಯಾಸಂಸ್ಥೆ, ಶಿವಮೊಗ್ಗ

೨) ನ್ಯಾಷನಲ್ ಎಜುಕೇಷನ್ ಸೊಸೈಟಿ, ಶಿವಮೊಗ್ಗ

೩) ಪಾದರ್‌ಮುಲ್ಲರ್ ಇನ್ಸ್‌ಟ್ಯೂಟ್, ಕಂಕನಾಡಿ, ಮಂಗಳೂರು

೪) ಅಕಾಡೆಮಿ ಆಫ್ ಲಿಬರಲ್ ಎಜುಕೇಷನ್ ಕೆ. ಎ. ಜಿ. ಮೆಮೋರಿಯಲ್ ಕಾಲೇಜು, ಸುಳ್ಯ, ಮಂಗಳೂರು.

೫) ನಿಟ್ಟೆ ವಿದ್ಯಾಸಂಸ್ಥೆ, ಮಂಗಳೂರು.

ಉಚ್ಚನ್ಯಾಯಾಲಯದ ನಿರ್ದೇಶನದ ಮೇರೆಗೆ ಪರಿಶೀಲಿಸುತ್ತಿರುವ ಪ್ರಸ್ತಾವನೆಗಳು :

೬) ಶ್ರೀ ಮುರುಘರಾಜೇಂದ್ರ ವಿದ್ಯಾಪೀಠ, ಚಿತ್ರದುರ್ಗ.

೭) ಮಹಾತ್ಮಾಗಾಂಧಿ ವಿದ್ಯಾಪೀಠ, ಬೆಂಗಳೂರು.

೮) ಶ್ರೀ ಸಿದ್ಧಗಂಗಾ ವಿದ್ಯಾಸಂಸ್ಥೆ, ತುಮಕೂರು.

ಆ) ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯ ನಿಯಮಗಳ ಕಾಯಿದೆ ೧೯೭೬ ಮತ್ತು ಭಾರತೀಯ ವೈದ್ಯಕೀಯ ಪರಿಷತ್ತಿನ ನಿಯಮಗಳಿಗೆ ಅನುಗುಣವಾಗಿ ಹಾಗೂ ವೈದ್ಯಕೀಯ ಕಾಲೇಜಿನ ಅವಶ್ಯಕತೆಯನ್ನು ಗಮನಿಸಿ ನಿರ್ಣಯಿಸಲಾಗುವುದು.

ಇ) ೬.

೧) ಆಲ್ ಅಮಿನ್ ವೈದ್ಯಕೀಯ ಕಾಲೇಜು, ಬಿಜಾಪುರ.

೨) ಜೆ. ಎಸ್. ಎಸ್. ವೈದ್ಯಕೀಯ ಕಾಲೇಜು, ಮೈಸೂರು

೩) ಆದಿಚುಂಚನಗಿರಿ ವೈದ್ಯಕೀಯ ಕಾಲೇಜು, ಬೆಳ್ಳೂರು.

೪) ಬಿಎಲ್‌ಡಿಇಎ ವೈದ್ಯಕೀಯ ಕಾಲೇಜು, ಬಿಜಾಪುರ.

೫) ಶ್ರೀ ದೇವರಾಜ ಅರಸ್ ವೈದ್ಯಕೀಯ ಕಾಲೇಜು, ಕೋಲಾರ.

೬) ಶ್ರೀ ಸಿದ್ಧಾರ್ಥ ವೈದ್ಯಕೀಯ ಕಾಲೇಜು, ತುಮಕೂರು.

ಆಲೂರು ಪಟ್ಟಣದಲ್ಲಿರುವ ಸಾರ್ವಜನಿಕ ಆಸ್ಪತ್ರೆಯ ಅಭಿವೃದ್ಧಿ

೬೫೩.(೧೧೮೨) ಶ್ರೀ ಬಿ. ಆರ್. ಗುರುದೇವ (ಸಕಲೇಶಪುರ).—ಮಾನ್ಯ ಆರೋಗ್ಯ ಹಾಗೂ ಕುಟುಂಬ ಕಲ್ಯಾಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ :—

ಅ) ಆಲೂರು ಪಟ್ಟಣದಲ್ಲಿರುವ ಸಾರ್ವಜನಿಕ ಆಸ್ಪತ್ರೆಯು ಸಣ್ಣ ಕೊಠಡಿಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಹಾಗಿದ್ದಲ್ಲಿ, ಈ ವರ್ಷದಲ್ಲಿ ಈ ಆಸ್ಪತ್ರೆಯ ಅಭಿವೃದ್ಧಿಗಾಗಿ ಸರ್ಕಾರವು ಹಣ ನಿಗದಿಪಡಿಸಲಾಗಿದೆಯೇ?

ಆ) ಸಕಲೇಶಪುರ ತಾಲ್ಲೂಕು ಯಸಳೂರಿನಲ್ಲಿರುವ ಆಸ್ಪತ್ರೆಯು ಬಿದ್ದುಹೋಗಿದ್ದು ಸಾರ್ವಜನಿಕರಿಗೆ ಬಹಳ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ? ಹಾಗಿದ್ದಲ್ಲಿ ಈ ಬಗ್ಗೆ ಸರ್ಕಾರ ಮುಂದೆ ತೆಗೆದುಕೊಳ್ಳಬೇಕಾದ ಕ್ರಮಗಳೇನು?

ಶ್ರೀಮತಿ ಮನೋರಮಾ ಮಧ್ವರಾಜ್ (ಆರೋಗ್ಯ ಹಾಗೂ ಕುಟುಂಬ ಕಲ್ಯಾಣ ಮಂತ್ರಿಗಳು).—

ಅ) ಆಲೂರು ಸಾರ್ವಜನಿಕ ಆಸ್ಪತ್ರೆಯು ಸಧ್ಯಕ್ಕೆ ಪ್ರಾಥಮಿಕ ಆರೋಗ್ಯ ಕೇಂದ್ರದ ಕಟ್ಟಡದಲ್ಲಿಯೇ ನಡೆಯುತ್ತಿದೆ. ೧೯೯೦-೯೧ನೇ ಸಾಲಿಗೆ ಈ ಆಸ್ಪತ್ರೆಯ ಅಭಿವೃದ್ಧಿಗಾಗಿ ರೂ. ೨.೦೦ ಲಕ್ಷಗಳನ್ನು ಜಿಲ್ಲಾ ಪರಿಷತ್ ಯೋಜನಾ ವೆಚ್ಚದಲ್ಲಿ ನಿಗದಿಪಡಿಸಲಾಗಿದೆ.

ಆ) ಇಲ್ಲ.

ಆಲೂರು ಮತ್ತು ಸಕಲೇಶಪುರ ತಾಲ್ಲೂಕುಗಳಲ್ಲಿ ಪಿ. ಹೆಚ್. ಯು ಮತ್ತು ಪಿ. ಹೆಚ್. ಸಿ. ಆಸ್ಪತ್ರೆಗಳ ಸಂಖ್ಯೆ

೬೫೪.(೧೧೮೮) ಶ್ರೀ ಬಿ. ಆರ್. ಗುರುದೇವ (ಸಕಲೇಶಪುರ).—ಮಾನ್ಯ ಆರೋಗ್ಯ ಹಾಗೂ ಕುಟುಂಬ ಕಲ್ಯಾಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯೆಯಿಟ್ಟು ಉತ್ತರಿಸುವರೆ :—

ಅ) ಆಲೂರು ಮತ್ತು ಸಕಲೇಶಪುರ, ತಾಲ್ಲೂಕುಗಳಲ್ಲಿ ಇರುವ ಒಟ್ಟು ಪ್ರಾಥಮಿಕ ಆರೋಗ್ಯ ಘಟಕ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರ ಆಸ್ಪತ್ರೆಗಳೆಷ್ಟು?

ಆ) ಈ ಆಸ್ಪತ್ರೆಗಳಲ್ಲಿ ಹಾಲಿ ಖಾಲಿ ಇರುವ ವೈದ್ಯರುಗಳ ನೇಮಕಕ್ಕೆ ಸರ್ಕಾರದವರು ಕೈಗೊಂಡಿರುವ ಕ್ರಮಗಳೇನು?

ಶ್ರೀಮತಿ ಮನೋರಮಾ ಮಧ್ವರಾಜ್ (ಆರೋಗ್ಯ ಮತ್ತು ಕಲ್ಯಾಣಕುಟುಂಬಮಂತ್ರಿಗಳು).—

ಅ)

ತಾಲ್ಲೂಕು	ಪ್ರಾಥಮಿಕ ಆರೋಗ್ಯ ಕೇಂದ್ರ	ಪ್ರಾಥಮಿಕ ಆರೋಗ್ಯ ಘಟಕ
ಆಲೂರು	೩	೨
ಸಕಲೇಶಪುರ	೬	೬

ಆ) ಖಾಲಿ ಇರುವ ಹುದ್ದೆಗಳನ್ನು ಆದಷ್ಟು ಬೇಗ ತುಂಬಲಾಗುವುದು.